ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯಲ್ಲಿನ ನದಿಗಳಲ್ಲಿ ತುಂಬಿರುವ ಹೂಳು ತೆಗೆಯುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) -

568 (513) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 3 ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ, ನದಿಗಳಲ್ಲಿ ಸಾಕಷ್ಟು ಹೂಳು ತುಂಬಿ ಅವುಗಳ ಸರಾಗ ಹರಿವಿಗೆ ಧಕ್ಕೆಗಾಗಿ, ಅಕ್ಕಪಕ್ಕದ ಸಾಗುವಳಿ ಜಮೀನು ಕೊಚ್ಚಿಕೊಂಡು ಹೋಗುವ ಮೂಲಕ ರೈತರು ಸಂಕಷ್ಟಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ನದಿಗಳಲ್ಲಿನ ಹೂಳನ್ನು ಇನ್ನೂ ತೆಗೆಯದಿರಲು ಕಾರಣಗಳೇನು;

(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈ ಕಾಮಗಾರಿಗೆ ಅನುದಾನವನ್ನು ಒದಗಿಸಲಾಗಿದೆಯೇ; ಒದಗಿಸಿದ್ದಲ್ಲಿ, ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನದ ಸಂಪೂರ್ಣ ವಿವರಗಳನ್ನು ನೀಡುವುದು;

(ಈ) ಜಿಲ್ಲೆಯಲ್ಲಿ, ನದಿಗಳಲ್ಲಿನ ಹೂಳು ತೆಗೆಯುವ ಕಾಮಗಾರಿಯನ್ನು ಪ್ರಸಕ್ತ ವರ್ಷದಲ್ಲೇ ಅನುಷ್ಠಾನಗೊಳಿಸಲಾಗುವುದೇ?